ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ: 21-09-2020 ರಂತೆ ದಿನಾಂಕ: 15-10-2022 ರಂದು ವರ್ತೂರು ವಾರ್ಡ್ ಸಂಖ್ಯೆ:112 (ಹಳೆ ನಂ.149)ರ ವಾರ್ಡ್ ಕಮಿಟಿ ಸಭೆಯನ್ನು ಶ್ರೀ.ಪಂಚಮುಖಿ ಗಣೇಶ ದೇವಸ್ಥಾನ (ಚೌಟ್ರಿ), ಹಾಲುಬಾವಿ ರಸ್ತೆ, ಸಂತೆ ಬೀದಿ, ವರ್ತೂರು ರಲ್ಲಿ ಶ್ರೀ.ವೆಂಕಟೇಶ್.ಟಿ.ಎಂ, ಸಹಾಯಕ ಅಭಿಯಂತರರು ಹಾಗೂ ನೋಡಲ್ ಅಧಿಕಾರಿಗಳು, ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:

<u>ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ</u>

1. ಶ್ರೀ.ವೆಂಕಟೇಶ್.ಟಿ.ಎಂ, ಸಹಾಯಕ ಅಭಿಯಂತರರು, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ರಮೇಶ್, ಸಹಾಯಕ ಅಭಿಯಂತರರು, ರಸ್ತೆಮೂಲಭೂತ ಸೌಕರ್ಯ ವಿಭಾಗ, ಬಿ.ಬಿ.ಎಂ.ಪಿ
3. ಶ್ರೀ.ಬಾಲಾಜಿ, ಕಿರಿಯ ಆರೋಗ್ಯ ನಿರೀಕ್ಷಕರರು, ವಾರ್ಡ್ ವರ್ತೂರು, ಬಿ.ಬಿ.ಎಂ.ಪಿ
4. ಶ್ರೀ.ಪ್ರವೀಣ್ ಕುಮಾರ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ.ಗಜೇಂದ್ರ.ಎಂ.ಆರ್, ಕಿರಿಯ ಅಭಿಯಂತರರು, ಬೆಸ್ಕಾಂ
6. ಶ್ರೀ.ಭವಾನಿ.ಕೆ.ಜಿ, ವಾರ್ಡ್ ಮಾರ್ಷಲ್, ವರ್ತೂರು
7. ವರ್ತೂರು ವಾರ್ಡಿನ ಶಕ್ತಿ ಕೇಂದ್ರದವರು ಹಾಗೂ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರು ಮತ್ತು ಸಾರ್ವಜನಿಕರು

***ಹಿಂದಿನ ಸಭೆಯಲ್ಲಿ ನಡೆದ ನಡವಳಿಗಳ ವರದಿಯನ್ನು ಅನುಷ್ಠಾನಗೊಂಡಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮಾಹಿತಿಯನ್ನು ಪಡೆದು, ಸಾರ್ವಜನಿಕರ ಮುಂದೆ ಮಂಡಿಸಲಾಯಿತು.***

1. ರಾಜ ಕಾಲುವೆ ಒತ್ತುವರಿಯನ್ನು ತೆರವುಗೊಳಿಸುವ ಕೆಲಸವನ್ನು ಮುನರಾಭಿಸಲು ಕೋರಿ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಬೃಹತ್ ರಾಜಕಾಲುವೆ ವಿಭಾಗದವರೊಂದಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.
2. ಬೃಹತ್ ರಾಜಕಾಲುವೆ ಕಾಮಗಾರಿ ಮಾಡುತ್ತಿರುವ ಗುತ್ತಿಗೆದಾರರಿಗೆ ಕಾಮಗಾರಿಯ ಬಗ್ಗೆ ಕ್ರಮ ಕೈಗೊಳ್ಳಲು ತಿಳಿಸುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಸನೋಡಲ್ ಅಧಿಕಾರಿಗಳು, ಬೃಹತ್ ರಾಜಕಾಲುವೆ ವಿಭಾಗದವರಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು.
3. ಸರ್ವೆ ನಂ.156 ತಿಪ್ಪಸಂದ್ರ ರಸ್ತೆ ರಾಜಕಾಲುವೆ ಒತ್ತುವರಿ ಮಾಡಿರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಕೋರಿ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಬೃಹತ್ ರಾಜಕಾಲುವೆ ವಿಭಾಗದವರಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು.
4. ವರ್ತೂರು ವಾರ್ಡ್‌ನ ಎಲ್ಲಾ ರಾಜಕಾಲುವೆಗಳ ಉದ್ದ, ಅಗಲದ ಮಾಹಿತಿ ನೀಡಲು ಕೋರಿ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಬೃಹತ್ ರಾಜಕಾಲುವೆ ವಿಭಾಗದವರಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು.
5. ವಾರ್ಡ್‌ನಲ್ಲಿ ನಡೆಯುತ್ತಿರುವ ಎಲ್ಲಾ ಕಾಮಗಾರಿಗಳ ಮಾಹಿತಿ ಒದಗಿಸಲು ಕೋರಿ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.
6. ವಾರ್ಡ್ ಕಛೇರಿಯಲ್ಲಿ ದೂರು ದಾಖಲು ಮಾಡಿಕೊಳ್ಳಲು ಒಬ್ಬರನ್ನು ನೇಮಿಸುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.
7. ವಾರ್ಡ್ ವ್ಯಾಪ್ತಿಯಲ್ಲಿ ಗ್ಯಾಂಗ್‌ಮ್ಯಾನ್‌ಗಳನ್ನು ಹೆಚ್ಚಿಸಲು ಕೋರಿ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

Scanned by CamScanner

8. ವರ್ತೂರು ಕೋಡಿಯಿಂದ ವರ್ತೂರು ವರೆಗಿನ ರಸ್ತೆಯನ್ನು ಪುನರ್ ಡಾಂಬರೀಕರಣ ಮಾಡಲು ಕೋರಿ.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು (ರ.ಮೂ.ಸೌ) ರವರು 15 ದಿನಗಳ ಒಳಗಾಗಿ ಸದರಿ ಕಾಮಗಾರಿಯನ್ನು ಮಾಡಲಾಗವುದು ಎಂದು ತಿಳಿಸಿದರು.

9. ವಾರ್ಡ್ ವ್ಯಾಪ್ತಿಯಲ್ಲಿ ಪಿ.ಎಂ.ಸಿ ಕಡೆಯ ಸಿಬ್ಬಂದಿಗಳು ಸರಿಯಾದ ಗುಣಮಟ್ಟ ಕಾಪಾಡದೇ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಬಗ್ಗೆ ಮಾನ್ಯ ಜಂಟಿ ಆಯುಕ್ತರು, ಬಿಬಿಎಂಪಿ ರವರಿಗೆ ಪತ್ರದ ಮುಖೇನ ತಿಳಿಸಿ, ಪಿ.ಎಂ.ಸಿ ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಜರುಗಿಸುವಂತೆ ಕೋರಿದರು.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಮಾನ್ಯ ಜಂಟಿ ಆಯುಕ್ತರು, ಬಿಬಿಎಂಪಿ ರವರ ಗಮನ ತಂದು, ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

10. ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಸಿ.ಸಿ. ರಸ್ತೆ ಕಾಮಗಾರಿಗೆ ಆರ್.ಎಂ.ಸಿ ಹಾಕಲು ಕೋರಿ.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

11. ಹಲಸಹಳ್ಳಿ ಮುಖ್ಯರಸ್ತೆಯ ಡಾಂಬರೀಕರಣ ಕಾಮಗಾರಿ ಮುಗಿದಿದ್ದು, ಅಲ್ಲಲ್ಲಿ ರಸ್ತೆಯು ಕುಸಿದಿರುವ ಜಾಗದಲ್ಲಿ ಮರುಡಾಂಬರೀಕರಣ ಮಾಡುವ ಬಗ್ಗೆ.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು (ರ.ಮೂ.ಸೌ), ರವರು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

12. ವರ್ತೂರು ಮುಖ್ಯರಸ್ತೆಯಲ್ಲಿ ವಾಹನಗಳ ದಟ್ಟಣೆ ಹೆಚ್ಚಾಗಿರುವುದರಿಂದ, ಸಂಚಾರಿ ಪೊಲೀಸ್ ಠಾಣೆಗೆ ಪತ್ರ ಬರೆಯಲು ಕೋರಿ.

➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಂಚಾರಿ ಪೊಲೀಸ್ ಠಾಣೆಗೆ ಪತ್ರ ಬರೆಯುವುದಾಗಿ ತಿಳಿಸಿದರು.

13. ಸೋರಹುಣಸೆ ಮುಖ್ಯರಸ್ತೆ ಅಭಿವೃದ್ಧಿ ಪಡಿಸುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ, ಕಾಮಗಾರಿಯನ್ನು ಪ್ರಾರಂಭಿಸಲು ಕೋರಿ.

➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಸಹಾಯಕ ಅಭಿಯಂತರರಿಗೆ (ಮೇಜರ್ ರೋಡ್ಸ್) ಸೂಚಿಸಿ, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

14. ವಾರ್ಡ್‌ನಲ್ಲಿ ಕೊರೆಸಿರುವ ಎಲ್ಲಾ ಕೊಳವೆ ಬಾವಿಗಳ ಜಿ.ಪಿ.ಎಸ್. ಛಾಯಾಚಿತ್ರದೊಂದಿಗೆ ಮಾಹಿತಿ ನೀಡಲು ಬಗ್ಗೆ.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಮಾಹಿತ ನೀಡಲು ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

15. ವಾರ್ಡ್ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆಗಳಲ್ಲಿ ಸಿಂಗಲ್ ಲೇನ್ ಪಾಲಿಸುವ ನಾಮಫಲಕ ಅಳವಡಿಸುವ ಬಗ್ಗೆ.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು(ರ.ಮೂ.ಸೌ), ರವರು ಟ್ರಾಫಿಕ್ ಪೊಲೀಸ್ ರವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

16. ವರ್ತೂರು ಹಾಲುಬಾವಿ ರಸ್ತೆಯಲ್ಲಿ ಬೀದಿ ದೀಪಗಳನ್ನು ಅಳವಡಿಸಲು ಕೋರಿ.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಬಿ.ಬಿ.ಎಂ.ಪಿ ವಿದ್ಯುತ್ ವಿಭಾಗಕ್ಕೆ ತಿಳಿಸಿ, ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗುವುದು ಎಂದು ಹೇಳಿದರು.

17. ಮಧುರಾನಗರ 2ನೇ ಹಂತದ ಸರ್ಕಾರಿ ಶಾಲೆಯ ಮುಂದೆ ಇರುವ ವಿದ್ಯುತ್ ಕಂಬವನ್ನು ಸ್ಥಳಾಂತರಿಸಲು.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆಗೆ ತಿಳಿಸಿ, ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗುವುದು ಎಂದು ಹೇಳಿದರು.

Scanned by CamScanner

18.ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸಲು ಬೆಸ್ಕಾಂ ಇಲಾಖೆ ಮತ್ತು ಬಿಬಿಎಂಪಿ ಇಲಾಖೆಯಿಂದ ಜಂಟಿ ಸರ್ವೆ ನಡೆಸಿ, ಕ್ರಮ ಕೈಗೊಳ್ಳುವುದು.

➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಬೆಸ್ಕಾಂ-ಸಹಾಯಕ ಅಭಿಯಂತರರಿಗೆ ಸೂಚಿಸಿ, ಜಂಟಿ ಸರ್ವೆ ಕಾರ್ಯ ಕೈಗೊಳ್ಳಲು ಸೂಚಿಸಲಾಗುವುದು ಎಂದು ತಿಳಿಸಿದರು.

19.ವರ್ತೂರ ಆದಿಶಕ್ತಿ ದೇವಸ್ಥಾನ ರಸ್ತೆ - ತೋಟದ ಮನೆ ವರೆಗೆ ಬಿ.ಬಿ.ಎಂ.ಪಿ ಯಿಂದ ಯಾವುದೇ ಮೂಲಭೂತ ಸೌಕರ್ಯ ನೀಡದಿರುವ ಬಗ್ಗೆ.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಸ್ಥಳ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

20.ವರ್ತೂರು 2ನೇ ಮುಖ್ಯರಸ್ತೆ -ಚನ್ನಕೇಶವ ದೇವಸ್ಥಾನದ ಎದುರು ರಸ್ತೆಯಲ್ಲಿ ಚರಂಡಿ ಹಾಗೂ ಕಲ್ವರ್ಟ್‌ನ ಕಾಮಗಾರಿಯನ್ನು ಸರಿಯಾಗಿ ಮಾಡದಿರುವ ಗುತ್ತಿಗೆದಾರಾದ ಶ್ರೀ.ಅಲಂಕಾರ ರವರಿಗೆ ನೋಟೀಸ್ ನೀಡಲು ಕೋರಿ.

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಸ್ಥಳ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

21.ಬೆಸ್ಕಾಂ ಇಲಾಖೆಯ ಕಾಮಗಾರಿಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು ರವರಿಗೆ ತಿಳಿಸುವ ಬಗ್ಗೆ.

➢ ಸದರಿ ವಿಷಯಕ್ಕೆ ಕಿರಿಯ ಅಭಿಯಂತರರು(ಬೆಸ್ಕಾಂ) ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ರವರಿಗೆ ತಿಳಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

22.ವರ್ತೂರು ಈದ್ಗಾ ರಸ್ತೆ- ತ್ರಿಜಿ ಯೋಗ ಬಡಾವಣೆಯಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಕೋರಿ,

➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಸ್ಥಳ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳುವಂತೆ ಹಾಗೂ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿರುತ್ತಾರೆ. ನೋಡಲ್ ಅಧಿಕಾರಿ ರವರ ಸೂಚನೆಯಂತೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

28/10/22

**ಕಾರ್ಯದರ್ಶಿ**
**ಸಹಾಯಕ ಅಭಿಯಂತರರು**
**ವಾರ್ಡ್ ನಂ: 112**

**ಪ್ರತಿಯನ್ನು**

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಮಹದೇವಪುರ ವಲಯ,ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಡಿ.ಹೆಚ್.ಓ ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಸೂಕ್ತ ಮಾಹಿತಿ/ಕ್ರಮಕ್ಕಾಗಿ ಸಲ್ಲಿಸಿದೆ.
4. ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಕ್ರಮಕ್ಕಾಗಿ.
5. ಎಲ್ಲಾ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.

Scanned by CamScanner